*ಆ) ದಕ್ಷಿಣ ಕನ್ನಡ ಜಿಲ್ಲೆಯ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ವಸತಿ ಗೃಹಗಳಲ್ಲಿ ಕೊರತೆ ಇರುವ ಸಿಬ್ಬಂದಿ ಎಷ್ಟು? (ವಿವರ ನೀಡುವುದು).*

ಶ್ರೀ ಕೆ.ಎಂ. ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಆ) ಹೌದು. ಇಲಾಖೆಯಲ್ಲಿನ ವಿದ್ಯಾರ್ಥಿ ನಿಲಯಗಳಲ್ಲಿ ಕೊರತೆ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ವಿದ್ಯಾರ್ಥಿ ನಿಲಯಗಳಲ್ಲಿ ಕೊರತೆ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| | | | |
|---|---|---|---|
| 1. | ಹಿರಿಯ ಮೇಲ್ವಿಚಾರಕಿ | : | 1 |
| 2. | ವಿದ್ಯಾರ್ಥಿನಿಲಯ ಮೇಲ್ವಿಚಾರಕರು (ಬಾಲಕರು 14 + ಬಾಲಕಿಯರು 5) | : | 19 |
| 3. | ಅಡಿಗೆಯವರು | : | 10 |
| 4. | ಅಡಿಗೆ ಸಹಾಯಕರು | : | 11 |

**ರಾಜ್ಯದಲ್ಲಿ ನಕಲಿ ಜಾತಿ ಪತ್ರಗಳ ಹಾವಳಿ**

1569 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ನಕಲಿ ಜಾತಿಪತ್ರಗಳನ್ನು ತಹಸೀಲ್ದಾರ್ ಕಚೇರಿಗಳಲ್ಲಿ ನೀಡುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

*ಆ) ಹಾಗಿದ್ದಲ್ಲಿ ನಕಲಿ ಜಾತಿ ಪತ್ರಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಕೆ.ಎಂ. ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

**ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಯವರಿಂದ ನೀಡಬೇಕಾದ ಹಣ**

1570 -ಶ್ರೀ ಎ. ರಾಮದಾಸ್ (ಕೃಷ್ಣರಾಜ್) : ಮಾನ್ಯ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?